**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ</u>**

**<u>ಕೆ ಆರ್ ನಗರ.</u>**

**<u>ಸಿ.ಸಿ. ನಂ. 68/2026</u>**

ಪಿರ್ಯಾದಿ ಃ ಸರ್ಕಾರದ ಪರ ಕೆ ಆರ್ ನಗರ ಪೋಲೀಸ್ ಠಾಣೆ

ಃವಿರುದ್ಧ ಃ

ಆರೋಪಿ ಃ ಪಾರ್ಥಿಬನ್ ಎನ್ ಬಿನ್ ನಟರಾಜು
45 ವರ್ಷ
ವಾಸಃ ಸುಂಡಾಕ ಮುತ್ತೂರು,
ಕೊಯಮತ್ತೂರು ಜಿಲ್ಲೆ,
ತಮಿಳುನಾಡು ರಾಜ್ಯ.

**<u>ದೋಷಾರೋಪಣೆ</u>**

ಶ್ರೀ ಚಂದನ್.ಎಸ್ ಬಿ.ಕಾಮ್.,ಎಲ್.ಎಲ್.ಬಿ. ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ನ್ಯಾಯಿಕ ದಂಡಾಧಿಕಾರಿ ನಾಯಾಧೀಶರು, ಕೆ.ಆರ್.ನಗರ ಆದ ನಾನು ಮೇಲ್ಕಂಡ ಆರೋಪಿಯಾದ ನಿಮ್ಮ ಮೇಲೆ ಈ ಕೆಳಗಿನಂತೆ ದೋಷಾರೋಪಿಸುವುದೇನೆಂದರೆಃ

ದಿನಾಂಕಃ 24-11-2025 ರಂದು ಮದ್ಯರಾತ್ರಿ 12.30 ಗಂಟೆಯ ಸಮಯದಲ್ಲಿ ಕೆ.ಆರ್.ನಗರ ಪೊಲೀಸ್ ಠಾಣಾ ಸರಹದ್ದು ಹಾಸನ-ಮೈಸೂರು ಮುಖ್ಯ ರಸ್ತೆಯ ಅರ್ಜುನಹಳ್ಳಿ ಗ್ರಾಮದ ಮಂಜುನಾಥರವರ ಜಮೀನಿನ ಮುಂದೆ ಇರುವ ಉತ್ತರ-ದಕ್ಷಿಣವಾಗಿ ಹಾದುಹೋಗಿರುವ ರಾಷ್ಟ್ರೀಯ ಹದ್ದಾರಿ 373 ರ ರಸ್ತೆಯಲ್ಲಿ ಆರೋಪಿಯಾದ ನೀವು ವಾಹನ ಸಂಖ್ಯೆ ಟಿಎನ್-42-+ಎಎಫ್-5639 ಟೋಯೋಟಾ ಗ್ಲಾಂಜಾ ಕಾರನ್ನು ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಹೋಗುತ್ತಿರುವಾಗ ನಾಯಿ ರಸ್ತೆಗೆ ಅಡ್ಡ ಬಂದಿದ್ದರಿಂದ ನಾಯಿಗೆ ಅಪಘಾತವನ್ನು ತಪ್ಪಿಸಲು ಹೋಗಿ ಬ್ರೇಕ್ ಹಾಕಿದ ಪರಿಣಾಮ ಕಾರಿನಲ್ಲಿದ್ದ ಚಾಸಾ-1 ರವರಿಗೆ ಅಪಘಾತ ಪಡಿಸಿರುತ್ತೀರಿ. ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ **281** ಅಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಎರಡನೇಯದಾಗಿ ಮೇಲೆ ಹೇಳಿದ ತಾರೀಖು, ಸಮಯ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ವಾಹನ ಸಂಖ್ಯೆ ಟಿಎನ್-42-+ಎಎಪ್-5639 ಟೋಯೋಟಾ ಗ್ಲಾಂಜಾ ಕಾರನ್ನು ಮಾನವ ಪ್ರಾಣಕ್ಕೆ ಹಾನಿಯಾಗುವ ರೀತಿಯಲ್ಲಿ ಅತಿವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿದ್ದರಿಂದ ಕಾರಿನಲ್ಲಿದ್ದ ಚಾಸಾ-1 ರವರ ಬಲಗೈಗೆ ತೆರಚಿದ ಹಾಗೂ ಆರೋಪಿಯಾದ ನಿಮ್ಮ ಎಡಗೈನ ಕಿರುಬೆರಳಿಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಆ ಮೂಲಕ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ **ಕಲಂ 125(ಎ)** ರಡಿ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುವಿರಿ ಎಂದು ಆರೋಪಣೆ ಹೊರಿಸಲಾಗಿದೆ.

ಪ್ರಃ 1) ಕನ್ನಡದಲ್ಲಿ ಓದಿ ಹೇಳಿದ ಮೇಲಿನ ದೋಷಾರೋಪಣೆ ಅರ್ಥವಾಯಿತೇ?

ಉಃ ಅರ್ಥವಾಯಿತು

ಪ್ರಃ 2) ಅಪರಾಧವನ್ನು ಒಪ್ಪಿಕೊಳ್ಳುವಿರೋ ಅಥವಾ ಸಾಕ್ಷಿಗಳ ವಿಚಾರಣೆಯಾಗ
ಬಯಸುವಿರಾ?

ಉಃ ಒಪ್ಪಿಕೊಳ್ಳುತ್ತೇನೆ

ಆರೋಪಿಯ ವಿರುದ್ದ ದೋಷಾರೋಪಣೆ ರಚಿಸಿ ನೇರವಾಗಿ ಓದಿ ತಿಳಿಸಿದ ನಂತರ ಆತನು ಕೊಟ್ಟ ಉತ್ತರವನ್ನೇ ಸರಿಯಾಗಿ ಪಡೆದುಕೊಳ್ಳಲಾಯಿತೆಂದು ದೃಢೀಕರಿಸಿದೆ.

ದಿಃ 23-01-2026

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ.ಗಳು,
ಕೆ ಆರ್ ನಗರ.

**ಆರೋಪಿಯ ಸಹಿಃ**